ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 25–08–2021

# ಪತ್ರಿಕಾ ಪ್ರಕಟಣೆ

**PRESS RELEASE**

## ಉಪರಾಷ್ಟ್ರಪತಿ ಎಂ. ವೆಂಕಯ್ಯ ನಾಯ್ಡು ಅವರಿಗೆ ಬೀಳ್ಕೊಡುಗೆ

ಬೆಂಗಳೂರು, ಆಗಸ್ಟ್ 25 (ಕನಾಟಕ ವಾರ್ತೆ):

ಆಗಷ್ಟ್ 16 ರಂದು ಕರ್ನಾಟಕಕ್ಕೆ ಸಂಸಾರ ಸಮೇತ ಆಗಮಿಸಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ವಿಶ್ವವಿಖ್ಯಾತ ಹಂಪಿಯ ಪ್ರವಾಸ ಮುಗಿಸಿ, ರಕ್ಷಾಬಂಧನ ಹಬ್ಬವನ್ನು ರಾಜಭವನದ ಮಕ್ಕಳ ಜೊತೆ ಆಚರಿಸಿ ಇಂದು ಬೆಳಿಗ್ಗೆ ನವದೆಹಲಿಗೆ ತೆರಳಿದ ಉಪ ರಾಷ್ಟ್ರಪತಿ ಎಂ. ವೆಂಕಯ್ಯ ನಾಯ್ಡು ಅವರನ್ನು ನಗರದ ಎಚ್ ಎ ಎಲ್ ವಿಮಾನ ನಿಲ್ದಾಣದಲ್ಲಿ ಬೀಳ್ಕೊಡಲಾಯಿತು.

ಈ ಸಂದರ್ಭದಲ್ಲಿ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಆರೋಗ್ಯ ಸಚಿವ ಡಾ. ಕೆ. ಸುಧಾಕರ್, ಸಂಸದ ಪಿ ಸಿ ಮೋಹನ್ ಅವರು ಉಪಸ್ಥಿತರಿದ್ದರು.

ಛಾಯಾಚಿತ್ರ ಲಗತ್ತಿಸಿದೆ).

## ನ್ಯಾಯ ವಿಜ್ಞಾನ ಪ್ರಯೋಗಾಲಯವನ್ನು ಉನ್ನತೀಕರಿಸಲು ಆದ್ಯತೆ : ಗೃಹ ಸಚಿವ ಅರಗ ಜ್ಞಾನೇಂದ್ರ

ಬೆಂಗಳೂರು, ಆಗಸ್ಟ್ 25 (ಕನಾಟಕ ವಾರ್ತೆ):

ನ್ಯಾಯ ವಿಜ್ಞಾನ ಪ್ರಯೋಗಾಲಯವನ್ನು ಉನ್ನತೀಕರಿಸಲು ಹೆಚ್ಚು ಆದ್ಯತೆ ನೀಡಲಾಗುವುದು ಎಂದು ಗೃಹ ಸಚಿವ ಅರಗ ಜ್ಞಾನೇಂದ್ರ ತಿಳಿಸಿದರು.

ಕೋರಮಂಗಲದ ಕೆಎಸ್‌ಆರ್ ಪಿ ಕ್ರೀಡಾಂಗಣದಲ್ಲಿಂದು ಹಮ್ಮಿಕೊಂಡಿದ್ದ ಪೊಲೀಸ್ ಪಬ್ಲಿಕ್ ಶಾಲೆಯ ಶಿಶು ವಿಹಾರ, ಆಡಳಿತ ಕಚೇರಿಯ ನೂತನ ಕಟ್ಟಡ ಉದ್ಘಾಟನೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಂಚಾರಿ ಫೋರೆನ್ಸಿಕ್ ಪ್ರಯೋಗಾಲಯಗಳಿಗೂ ಕೂಡ ಇಂದು ಚಾಲನೆ ನೀಡಲಾಗಿದೆ. ಆಡುಗೋಡಿಯಲ್ಲಿ ಪೊಲೀಸ್ ಇಲಾಖೆಯ ನೂರು ಎಕರೆ ಜಾಗವಿದ್ದು, ಅಲ್ಲಿ ಮತ್ತೊಂದು ಪೊಲೀಸ್ ಪಬ್ಲಿಕ್ ಶಾಲೆ ಪ್ರಾರಂಭಿಸುವ ಸಂಬಂಧ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಚರ್ಚಿಸಿ ತೀರ್ಮಾನಿಸಲಾಗುವುದು ಎಂದು ತಿಳಿಸಿದರು.

ಪೊಲೀಸರ ಮಕ್ಕಳಿಗೂ ಉತ್ತಮ ಗುಣಮಟ್ಟದ ಶಿಕ್ಷಣ ನೀಡಲು ಪೊಲೀಸ್ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ನಾಗರಿಕರು ನೆಮ್ಮದಿಯ ಬದುಕು ನಡೆಸಲು ಹಗಲಿರುಳು ಪೊಲೀಸರು ಎಚ್ಚರವಾಗಿದ್ದು, ರಕ್ಷಣೆ ಮಾಡಬೇಕಾಗಿದೆ. ರಾಷ್ಟ್ರದ ಗಡಿ ಕಾಯುವ ಸೈನಿಕರಿಗೆ ತಮ್ಮ ಶತ್ರುಗಳ ಬಗ್ಗೆ ಅರಿವಿರುತ್ತದೆ. ಆದರೆ, ನಾಡಿನಲ್ಲಿ ಸೇವೆ ಸಲ್ಲಿಸುವ ಪೊಲೀಸರಿಗೆ ಅಂತಹ ಮಾಹಿತಿ ಇರುವುದಿಲ್ಲ. ಒಂದು ರೀತಿಯಲ್ಲಿ ಸವಾಲಿನ ಕೆಲಸವನ್ನು ಪೊಲೀಸರು ನಿಭಾಯಿಸಬೇಕಾಗಿದೆ ಎಂದು ಹೇಳಿದರು.

ಪೊಲೀಸರು ಮತ್ತು ಅವರ ಕುಟುಂಬದವರಿಗೆ ಕಲ್ಯಾಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ರಾಜ್ಯದಲ್ಲಿ ಮಾದಕ ವಸ್ತು ಮುಲೋತ್ಪಾಟನೆ ಮಾಡಲು ನಿರ್ಧಾರ ಮಾಡಲಾಗಿದೆ. ಯುವಕರು ಮಾದಕ ವಸ್ತುಗಳಿಗೆ ಬಲಿಯಾಗುವುದನ್ನು ತಪ್ಪಿಸಲು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ರಾಮಲಿಂಗಾರೆಡ್ಡಿ, ಒಳಾಡಳಿತ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಡಾ.ರಜನೀಶ್ ಗೋಯಲ್, ರಾಜ್ಯ ಪೊಲೀಸ್ ಮಹಾನಿರ್ದೇಶಕ ಪ್ರವೀಣ್‌ಸೂದ್, ರಾಜ್ಯ ಅಪರ ಪೊಲೀಸ್ ಮಹಾನಿರ್ದೇಶಕರಾದ ಅಲೋಕ್‌ಕುಮಾರ್, ಡಾ.ಎ.ಎಸ್.ಎನ್.ಮೂರ್ತಿ ಮತ್ತಿತರ ಗಣ್ಯರು ಪಾಲ್ಗೊಂಡಿದ್ದರು.

## ಟಿಕೇಟ್ ರಹಿತ ಪ್ರಯಾಣಿಕರಿಂದ ರೂ.2,67,950 ದಂಡ ವಸೂಲಿ

ಬೆಂಗಳೂರು, ಆಗಸ್ಟ್ 25 (ಕನಾಟಕ ವಾರ್ತೆ):

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವಾಹನಗಳಲ್ಲಿ ಸಂಚರಿಸುವ ಪ್ರಯಾಣಿಕರು ಟಿಕೇಟನ್ನು ಪಡೆಯದೆ ಅನಧಿಕೃತವಾಗಿ ಪ್ರಯಾಣ ಮಾಡುವವರನ್ನು ಮತ್ತು ಸಂಸ್ಥೆಯ ಸಾರಿಗೆ ಆದಾಯದ ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ನಗರದಾದ್ಯಂತ ಸಂಚರಿಸುವ ವಾಹನಗಳನ್ನು ನಮ್ಮ ಸಂಸ್ಥೆಯ ತನಿಖಾ ತಂಡಗಳು ಜುಲೈ–2021 ರ ಮಾಹೆಯಲ್ಲಿ ಒಟ್ಟು 17,799 ಟ್ರಿಪ್‌ಗಳನ್ನು ತಪಾಸಿಸಿ, 1704 ಟಿಕೇಟ್ ರಹಿತ ಪ್ರಯಾಣಿಕರನ್ನು ಪತ್ತೆ ಹಚ್ಚಿ, ಅವರಿಂದ ಒಟ್ಟು ರೂ.2,67,950/– ದಂಡ ವಸೂಲಿ ಮಾಡಿ ಸಂಸ್ಥೆಯ ನಿರ್ವಾಹಕರುಗಳ ವಿರುದ್ಧ 1188 ಪ್ರಕರಣಗಳನ್ನು ದಾಖಲಿಸಿರುತ್ತಾರೆ.

ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಕುಳಿತು ಪ್ರಯಾಣಿಸಿರುವ 04 ಪುರುಷ ಪ್ರಯಾಣಿಕರಿಂದ ಒಟ್ಟು ರೂ. 400/– ಗಳನ್ನು ಮೋಟಾರು ವಾಹನ ಕಾಯ್ದೆ 1988 ಕಲಂ 177 ಮತ್ತು 94ರ ಪ್ರಕಾರ ದಂಡ ವಿಧಿಸಲಾಗಿರುತ್ತದೆ. ಒಟ್ಟಾರೆಯಾಗಿ ಜುಲೈ–2021 ರ ಮಾಹೆಯಲ್ಲಿ 1708 ಪ್ರಯಾಣಿಕರಿಂದ ಒಟ್ಟು ರೂ.2,68,350/– ದಂಡವನ್ನು ವಸೂಲಿ ಮಾಡಲಾಗಿದೆ.

ಪ್ರಯಾಣಿಕರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಾಗ ಅಧಿಕೃತ ಟಿಕೇಟ್ / ದಿನದ ಪಾಸು / ಮಾಸಿಕ ಪಾಸುಗಳನ್ನು ಹೊಂದಿ ಪ್ರಯಾಣಿಸುವುದು. ಇದರಿಂದ ಅನಗತ್ಯ ದಂಡ ಕಟ್ಟುವುದನ್ನು ತಡೆಯಬಹುದಾಗಿದೆ ಹಾಗೂ ಇಂತಹ ಪ್ರವೃತ್ತಿಯಿಂದ ಸಂಸ್ಥೆಯು ಉತ್ತಮ ಸೇವೆಯನ್ನು ಪ್ರಯಾಣಿಕರಿಗೆ ನೀಡಲು ಸಹಾಯವಾಗುತ್ತದೆ. ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಪುರುಷ ಪ್ರಯಾಣಿಕರು ಆಸನಗಳನ್ನು ತೆರವು ಮಾಡಿಕೊಡುವ ಮೂಲಕ ಅವರಿಗೆ ಕುಳಿತುಕೊಳ್ಳಲು ಅವಕಾಶ ನೀಡಬೇಕೆಂದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Ticketless passengers by collecting Rs. 2,67,950

**Bengaluru, August 25 (Karnataka Information):**

The Checking staff of Bangalore Metropolitan Transport Corporation has intensified checking of buses operated in and around Bangalore City to detect ticketless travelling by the passengers. During the Month of July-2021 our staff had checked 17,799 trips and penalized 1704 ticketless passengers by collecting Rs. 2,67,950/- as penalty and booked 1188 cases against conductor's for their dereliction of duty.

During the aforesaid period the Checking Staff had penalized 04 male passengers occupying seats exclusively reserved for lady passengers & imposed fine of Rs. 400/- in accordance with KMV Rules 94 r/w section 177 of MV Act 1988.

During the Month of July-2021 overall Rs.2,68,350/- penalty from 1708 penalized passengers was collected.

Passengers are advised to purchase tickets / pass and travel - this will not only avoid levy of penalty / embarrassment but will also help BMTC to give better services to all commuters. Kindly allow the female passengers to occupy the seats exclusively reserved for them.

## ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 25 (ಕನಾಟಕ ವಾರ್ತೆ):

ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ವಿ.ಸೋಮಣ್ಣ ಅವರು ಆಗಸ್ಟ್ 28 ರಂದು ರಾಮನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ವಾಪಸ್ಸಾಗಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ

ಬೆಂಗಳೂರು, ಆಗಸ್ಟ್ 25 (ಕನಾಟಕ ವಾರ್ತೆ):

**ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 25.8.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 39 | ಉತ್ತಮ | CO |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 54 | ತೃಪ್ತಿಕರ | Ozone |
| 3 | ಕವಿಕ, ಮೈಸೂರುರಸ್ತೆ | 52 | ತೃಪ್ತಿಕರ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 44 | ಉತ್ತಮ | Ozone |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 63 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 59 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 48 | ಉತ್ತಮ | $PM_{10}$, CO |
| **(25.8.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 58 | ತೃಪ್ತಿಕರ | $PM_{10}$ |
| 9 | ಪೀಣ್ಯ | 66 | ತೃಪ್ತಿಕರ | $PM_{10}$ |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

**AQI of the CAAQM stations established in Bengaluru City**

**Date : 25.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 39 | Good | CO |
| 2 | Jayanagar 5th Block, Shalini ground | 54 | Satisfactory | Ozone |
| 3 | KAVIKA, Mysore Road | 52 | Satisfactory | $PM_{10}$ |
| 4 | Rajeev Gandhi Institute of Chest Disease, NIMHANS, Hombegowda Nagar | 44 | Good | Ozone |
| 5 | HSR Layout, near Central Silkboard | 63 | Satisfactory | $PM_{10}$ |
| 6 | City Railway Station, Magestic, Bengaluru | 59 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 48 | Good | $PM_{10}$, CO |
| **(25.8.2021 at 11.05 AM)** | | | | |
| 8 | BWSSB, Kadabesanahalli | 58 | Satisfactory | $PM_{10}$ |
| 9 | Peenya | 66 | Satisfactory | $PM_{10}$ |
| 10 | BTM Layout | * | * | * |

| Category (Range) | Possible Health Impacts | Category (Range) | Possible Health Impacts |
|---|---|---|---|

| | | | |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |